ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE 30/3/21

# ಸಿಡಿ ಯುವತಿಯಿಂದ ಮುಖ್ಯ ನ್ಯಾಯಮೂರ್ತಿಗೆ ಪತ್ರ

## ಇ-ಮೇಲ್ ಮೂಲಕ ಪತ್ರ ಬರೆದ ಸಿಡಿ ಯುವತಿ । ನಿಮ್ಮ ನೇತೃತ್ವದಲ್ಲಿಯೇ ಎಸ್ಐಟಿ ತನಿಖೆ ಆಗಬೇಕೆಂದ ಸಂತ್ರಸ್ತೆ

ಬೆಂಗಳೂರು: ಅಶ್ಲೀಲ ವಿಡಿಯೊ ಸಂಬಂಧ ಸಿಡಿಯಲ್ಲಿರುವ ಯುವತಿ ಹೈಕೋರ್ಟ್ ಮುಖ್ಯನ್ಯಾಯಮೂರ್ತಿಗಳಿಗೆ ಪತ್ರ ಬರೆದು ತಮ್ಮ ಮೇಲುಸ್ತುವಾರಿಯಲ್ಲಿಯೇ ಎಸ್ಐಟಿ ತನಿಖೆ ನಡೆಸಬೇಕು ಎಂದು ಮನವಿ ಮಾಡಿದ್ದಾರೆ. ಈ ಮೂಲಕ ಪ್ರಕರಣ ಇನ್ನಷ್ಟು ತೀವ್ರತೆ ಪಡೆದುಕೊಂಡಿದೆ.

ಭಾನುವಾರ ಈ ಪತ್ರವನ್ನು ಮುಖ್ಯ ನ್ಯಾಯಾಮೂರ್ತಿಗಳಿಗೆ ಇ-ಮೇಲ್ ಮೂಲಕ ರವಾನಿಸಿರುವ ಯುವತಿ, 'ನಾನು ಅತ್ಯಾಚಾರ ಸಂತ್ರಸ್ತೆ. ಈ ಸಂಬಂಧ ಮಾಜಿ ಸಚಿವ ರಮೇಶ್ ಜಾರಕಿಹೊಳಿ ವಿರುದ್ಧ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದು ಐಟಿ ಕಾಯ್ದೆ ಮತ್ತು ಭಾರತೀಯ ದಂಡ ಸಂಹಿತೆಯ ಪ್ರಮುಖ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಾಗಿದೆ'.

'ರಮೇಶ್ ಜಾರಕಿಹೊಳಿ ಪ್ರಭಾವಿ ವ್ಯಕ್ತಿಯಾಗಿದ್ದು ಸಾರ್ವಜನಿಕವಾಗಿ ನನಗೆ ಬೆದರಿಕೆ ಹಾಕಿದ್ದಾರೆ. ಅಲ್ಲದೆ, ರಮೇಶ್ ಜಾರಕಿಹೊಳಿ ಮತ್ತು ಅವರ ಬೆಂಬಲಿಗರಿಂದ ಬೆದರಿಕೆ ಇದೆ. ನನ್ನ ಪೋಷಕರ ಮೂಲಕ ನನ್ನನ್ನು ನಿಯಂತ್ರಿಸುತ್ತಿದ್ದಾರೆ. ಎಸ್ಐಟಿಯಿಂದ ನನಗೆ ಹಾಗೂ ನನ್ನ ಕುಟುಂಬಕ್ಕೆ ಯಾವುದೇ ರಕ್ಷಣೆ ಇಲ್ಲ, ತನಿಖಾ ಸಂಸ್ಥೆ ಮೇಲೆ ಮಾಜಿ ಸಚಿವರು ಪ್ರಭಾವ ಬೀರಿದ್ದಾರೆ. ಈಗಾಗಲೇ ಅವರು ಸಾಕ್ಷ್ಯ ನಾಶ ಪಡಿಸುತ್ತಿದ್ದಾರೆ. ಪ್ರಕರಣದಲ್ಲಿ ನನ್ನ ತಂದೆ ತಾಯಿಯಿಂದ ಬಲವಂತವಾಗಿ ಹೇಳಿಕೆ ಕೊಡಿಸಲಾಗಿದೆ. ನನಗೆ ಮತ್ತು ನನ್ನ ಪಾಲಕರಿಗೆ ರಕ್ಷಣೆ ಒದಗಿಸಬೇಕು' ಎಂದು ಮನವಿ ಮಾಡಿದ್ದಾಳೆ.

'ಎಸ್ಐಟಿ ರಮೇಶ್ ಜಾರಕಿಹೊಳಿ ಮತ್ತು ಸರ್ಕಾರ ಹೇಳಿದಂತೆ ಕೇಳುತ್ತಿದೆ. ಜತೆಗೆ ಅವರನ್ನು ರಕ್ಷಣೆ ಮಾಡುತ್ತಿದೆ. ಈಗಾಗಲೇ ಮಾಧ್ಯಮದ ಮೂಲಕ ಹೇಳಿಕೆ ನೀಡಿರುವ ಜಾರಕಿಹೊಳಿ ಯಾವುದೇ ಕಾರಣಕ್ಕೂ ನಮ್ಮನ್ನು ಬಿಡುವುದಿಲ್ಲ ಎಂದು ಬೆದರಿಕೆ ಹಾಕಿದ್ದಾರೆ. ಯಾವುದೇ ಸಂದರ್ಭದಲ್ಲೂ ರಮೇಶ್ ಜಾರಕಿಹೊಳಿ ಅವರು ನನ್ನ ಹತ್ಯೆ ಮಾಡಬಹುದು. ಈ ಮೂಲಕ ಪ್ರಕರಣ ಸಾಕ್ಷ್ಯ ನಾಶ ಪಡಿಸುವ ಸಾಧ್ಯತೆಯಿದೆ. ಕುಟುಂಬದವರ ಮೇಲೆ ಒತ್ತಡ ಹಾಕಿ ನನ್ನ ಅಪಹರಣ ಮಾಡಲಾಗಿದೆ ಎಂದು ಹೇಳಿಕೆ ನೀಡಿಸುತ್ತಿದ್ದಾರೆ'.

**3ನೇ ಬಾರಿ ಯುವತಿಗೆ ನೋಟಿಸ್**

[illegible]

**ಡಿವೈಎಸ್ಪಿಯಿಂದ ಬೆದರಿಕೆ:** 'ನಮ್ಮ ಪಾಲಕರಿಗೆ ಡಿವೈಎಸ್‌ಪಿ ಕಟ್ಟಿಮನಿ ಒತ್ತಡ ಹಾಕಿ ಜಾರಕಿಹೊಳಿ ಪರ ಹೇಳಿಕೆ ನೀಡುವಂತೆ ಬೆದರಿಕೆ ಸಹ ಹಾಕಿರುತ್ತಾರೆ. ಹೀಗಾಗಿ ನ್ಯಾಯಾಲಯ ನನಗೆ ಮತ್ತು ನನ್ನ ಕುಟುಂಬಕ್ಕೆ ಸೂಕ್ತ ಭದ್ರತೆ ನೀಡಬೇಕು. ಎಸ್ಐಟಿ ತನಿಖೆ ನಿಮ್ಮ ಮೇಲುಸ್ತುವಾರಿಯಲ್ಲೇ ನಡೆಯಬೇಕು ಎಂದು ಮನವಿ ಮಾಡಿದ್ದಾರೆ.

**ಯುವತಿ ಕೋರ್ಟ್‌ಗೆ ಹಾಜರಾಗಲು ಸಿದ್ಧತೆ:** ಪ್ರಕರಣಕ್ಕೆ ಸಂಬಂಧಿಸಿದಂತೆ ಯುವತಿಯನ್ನು ನ್ಯಾಯಾಧೀಶರ ಮುಂದೆ ಹಾಜರುಪಡಿಸಲು ಎಲ್ಲ ಸಿದ್ಧತೆಗಳೂ ನಡೆದಿದ್ದು ಈಗಾಗಲೇ ಮ್ಯಾಜಿಸ್ಟ್ರೇಟ್ ಕೋರ್ಟ್‌ನ ಡೆಪ್ಯೂಟಿ ರಿಜಿಸ್ಟ್ರಾರ್ ಅವರು ಸಿಆರ್‌ಪಿಸಿ 164 ಪ್ರಕಾರ ಯುವತಿ ಸ್ವಇಚ್ಛೆ ಹೇಳಿಕೆ ದಾಖಲಿಸಲು ಅನುಮತಿ ನೀಡಿ ಆದೇಶಿಸಿದ್ದಾರೆ.

ಯುವತಿ ಪರ ವಕೀಲ ಕೆ.ಎನ್.ಜಗದೀಶ್ ಬೆಳಗ್ಗೆ ಡೆಪ್ಯೂಟಿ ರಿಜಿಸ್ಟ್ರಾರ್ ಅವರನ್ನು ಭೇಟಿಯಾಗಿ ಸಿಆರ್‌ಪಿಸಿ 164 ಅಡಿ ಯುವತಿಗೆ ಹೇಳಿಕೆ ದಾಖಲಿಸಲು ಅನುಮತಿ ನೀಡುವಂತೆ ಮನವಿ ಮಾಡಿದರು. ಅರ್ಜಿ ಪರಿಶೀಲಿಸಿದ ಅವರು ಸಂಜೆ ವೇಳೆಗೆ ಅನುಮತಿ ನೀಡಿದರು. ಈ ಬೆಳವಣಿಗೆಗಳ ಬೆನ್ನಲ್ಲೇ ಯುವತಿ ಪರ ವಕೀಲ ಜಗದೀಶ್ ಮ್ಯಾಜಿಸ್ಟ್ರೇಟ್ ಕೋರ್ಟ್‌ಗೆ ತೆರಳಿ ಆದೇಶ ಪ್ರತಿ ಪಡೆದುಕೊಂಡರು. ಭದ್ರತೆ ದೃಷ್ಟಿಯಿಂದ ಯುವತಿಯನ್ನು ನ್ಯಾಯಾಧೀಶರ ಮುಂದೆ ಹೇಗೆ? ಹಾಜರುಪಡಿಬೇಕೆಂದು ಇ-ಮೇಲ್ ಮೂಲಕ ಡೆಪ್ಯೂಟಿ ರಿಜಿಸ್ಟ್ರಾರ್ ಅವರು ತಿಳಿಸಲಿದ್ದಾರೆ. ಅದರಲ್ಲಿ ಯಾವ ದಿನ, ಸಮಯವನ್ನು ಅವರೇ ಉಲ್ಲೇಖಿಸಲಿದ್ದಾರೆ. ಬಳಿಕ 24ನೇ ಎಸಿಎಂಎಂನ ನ್ಯಾಯಾಧೀಶರ ಎದುರು ಹಾಜರು ಪಡಿಸಲಾಗುತ್ತದೆ.

ಈ ಕುರಿತು ಪ್ರತಿಕ್ರಿಯೆ ನೀಡಿದ ವಕೀಲ ಜಗದೀಶ್, ಯುವತಿಯನ್ನು ಕೋರ್ಟ್‌ಗೆ ಹಾಜರುಪಡಿಸಲು ಆದೇಶವಾಗಿದೆ. ಆದರೆ, ಎಲ್ಲಿ ? ಯಾವಾಗ ಹಾಜರುಪಡಿಸಬೇಕು ಎಂಬ ಆದೇಶಕ್ಕೆ ಕಾಯುತ್ತಿದ್ದೇವೆ. ನ್ಯಾಯಾಧೀಶರ ಮನೆಗೆ ಹಾಜರುಪಡಿಸಬೇಕಾ? ಅಥವಾ ನ್ಯಾಯಾಲಯಕ್ಕೆ ಹಾಜರು ಪಡಿಸಬೇಕಾ? ಎಂಬುದನ್ನು ಇ-ಮೇಲ್ ಮೂಲಕ ತಿಳಿಸುತ್ತಾರೆ. ನಾವು ಈಗಾಗಲೇ ಯುವತಿಯನ್ನು ಹಾಜರುಪಡಿಸಲು ಸಿದ್ಧರಾಗಿದ್ದೇವೆ ಎಂದು ಹೇಳಿದರು.

### ಬಿಗಿ ಪೊಲೀಸ್ ಬಂದೋಬಸ್ತ್

ಸೋಮವಾರ ಯುವತಿ ಕೋರ್ಟ್ ಮುಂದೆ ಹಾಜರಾಗುವ ಸಾಧ್ಯತೆಗಳಿರುವ ಹಿನ್ನೆಲೆಯಲ್ಲಿ ಮುಂಜಾಗ್ರತ ಕ್ರಮವಾಗಿ ಎಸಿಎಂಎಂ ಕೋರ್ಟ್ ಸುತ್ತ-ಮುತ್ತ ಬಿಗಿ ಪೊಲೀಸ್ ಭದ್ರತೆ ಕಲ್ಪಿಸಲಾಗಿತ್ತು. ಪಶ್ಚಿಮ ವಿಭಾಗ ಡಿಸಿಪಿ ಸಂಜೀವ್.ಎಂ.ಪಾಟೀಲ್ ನೇತೃತ್ವದಲ್ಲಿ 2 ಎಸಿಪಿ, 5 ಜನ ಇನ್‌ಸ್ಪೆಕ್ಟರ್, 10 ಜನ ಸಬ್ ಇನ್‌ಸ್ಪೆಕ್ಟರ್ ಸೇರಿ ನೂರಾರು ಪೊಲೀಸರನ್ನು ನಿಯೋಜಿಸಲಾಗಿತ್ತು. ಕೋರ್ಟ್‌ಗೆ ಹಾಜರಾಗುವ ಸಂದರ್ಭದಲ್ಲಿ ಯುವತಿಯ ಭದ್ರತೆಗೆ ಎಂಟು ಮಂದಿ ಹಿರಿಯ ಅಧಿಕಾರಿಗಳ ನೇತೃತ್ವದಲ್ಲಿ ಭದ್ರತೆ ಒದಗಿಸಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

### ಶ್ರವಣ್ ಸಹೋದರ ವಿಚಾರಣೆ

ಪ್ರಕರಣದ 2ನೇ ಕಿಂಗ್‌ಪಿನ್ ಎನ್ನಲಾದ ಪತ್ರಕರ್ತ ಶ್ರವಣ್ ಸಹೋದರ ಚೇತನ್ ಸೋಮವಾರ ಆಡುಗೋಡಿಯ ಟೆಕ್ನಿಕಲ್ ಸೆಲ್‌ಗೆ ವಿಚಾರಣೆಗೆ ಹಾಜರಾಗಿದ್ದರು. ಈ ವೇಳೆ ಇತ್ತೀಚೆಗೆ ಶ್ರವಣ್ ಸಂಪರ್ಕಿಸಿದ್ದಾನಾ? ಅಥವಾ ಆತನ ಹೆಸರಿನಲ್ಲಿ ಬೇರೆ ಯಾರಾದರೂ ಸಂಪರ್ಕಿಸಿದ್ದರೇ? ಎಂದು ಪ್ರಶ್ನಿಸಿದ್ದಾರೆ ಎಂದು ಹೇಳಲಾಗಿದೆ. ಆದರೆ, ಪ್ರಕರಣದ ಒಂದನೇ ಕಿಂಗ್‌ಪಿನ್ ಎನ್ನಲಾದ ಪತ್ರಕರ್ತ ನರೇಶ್ ಗೌಡ ಪತ್ತೆ ವಿಚಾರಣೆಗೆ ಗೈರಾಗಿದ್ದಾರೆ.

### ಎಸ್ಐಟಿ ಸೂಕ್ತವಾಗಿ ತನಿಖೆ ನಡೆಸುತ್ತಿದೆ

ರಮೇಶ್ ಜಾರಕಿಹೊಳಿ ಅವರ ಪರ ವಕೀಲರಾದ ಶ್ಯಾಮ್ ಸುಂದರ್ ಮಾತನಾಡಿ, ಪ್ರಕರಣದಲ್ಲಿ ಯುವತಿ ಸಿಆರ್‌ಪಿಸಿ 164 ಪ್ರಕಾರ ಹೇಳಿಕೆ ದಾಖಲಿಸಬಹುದು. ಆದರೆ, ನೇರವಾಗಿ ಕೋರ್ಟ್‌ಗೆ ಹೋಗುತ್ತೇವೆ ಎಂಬುದು ಅಮಾನ್ಯವಾದುದ್ದು. ಆಕೆಗೆ ಹಕ್ಕಿದೆ. ಆದರೆ, ಅದಕ್ಕೂ ಕೆಲವೊಂದು ನಿಯಮಗಳಿವೆ. ಮೊದಲು ತನಿಖಾಧಿಕಾರಿಗಳ ಎದುರು ಹಾಜರಾಗಬೇಕು. ಬಳಿಕ ತನಿಖಾಧಿಕಾರಿಗಳು ಕೋರ್ಟ್‌ಗೆ ಮನವಿ ಮಾಡಿ ಹಾಜರು ಪಡಿಸುತ್ತಾರೆ ಎಂದರು. ಯಾವ ನಿಟ್ಟಿನಲ್ಲಿ ತನಿಖೆ ನಡೆಯಬೇಕೋ ಅದನ್ನು ಎಸ್ಐಟಿ ತಂಡ ಸೂಕ್ತ ರೀತಿಯಲ್ಲಿ ನಡೆಸುತ್ತಿದೆ. ರಮೇಶ್ ಜಾರಕಿಹೊಳಿ ಮಾಜಿ ಸಚಿವರು ಎಂಬ ಕಾರಣಕ್ಕೆ ಯಾವುದೇ ರೀತಿಯಾದ ತಾರತಮ್ಯ ಮಾಡುತ್ತಿಲ್ಲ. ಯಾವುದೇ ಬಗೆಯ ತನಿಖೆಗೂ ನಾನು ಸಿದ್ಧ ಎಂಬುದನ್ನು ರಮೇಶ್ ಜಾರಕಿಹೊಳಿ ಈಗಾಗಲೇ ಹೇಳಿದ್ದಾರೆ ಎಂದರು.